# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 138

20-11-2020 ರಂದು ಶನಿವಾರ ಬೆಳಿಗ್ಗೆ 12.00 ಘಂಟೆಗೆ ವಾರ್ಡ್ ಸಂಖ್ಯೆ: 138 ಭಲವಾಧಿ ಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ ಕೆ. ಬಿ ತಾರಾನಾಥ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಟನ್ ಪೇಟೆ, ಉಪವಿಭಾಗ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 138 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ ಕೆ. ಬಿ ತಾರಾನಾಥ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಅಧ್ಯಕ್ಷರು: ಭಲವಾಧಿ ಪಾಳ್ಯ ವಾರ್ಡ್ ವ್ಯಾಪ್ತಿಯು ಹೆಚ್ಚಿನ ಪ್ರಮಾಣದಲ್ಲಿ ಸ್ಲಂಗಳಿಂದ ಕೂಡಿದ್ದು ಸದರಿ ಪ್ರದೇಶಗಳಲ್ಲಿ ಸಮೂದಾಯ ಶೌಚಾಲಯಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉಪಯೋಗಿಸುತ್ತಿರುವುದರಿಂದ ಸಮೂದಾಯ ಶೌಚಾಲಯಗಳನ್ನು ನಿರ್ವಹಣೆ ಮಾಡಿ ಸಾರ್ವಜನಿಕರಿಗೆ ಹೆಚ್ಚಿನ ಪ್ರಮಾಣದಲ್ಲಿ ಉಪಯೋಗಿಸಲು ಅನುಕೂಲ ಮಾಡಿಕೊಡುವಂತೆ ಕೋರಿದರು.

ವಾರ್ಡ್ ಕಮೀಟಿ ಸದಸ್ಯರು ವಾರ್ಡ್‌ನಲ್ಲಿ ಪೌರ ಕಾರ್ಮಿಕರು ಮತ್ತು ಮನೆ ಮನೆಯಿಂದ ಕಸ ವಿಲೇವರಿಯಾಗದೆ ರಸ್ತೆ ಬದಿಗಳಲ್ಲಿ ಕಸ ಬಿಸಡುತ್ತಿರುವುದು ಮತ್ತು ಸಣ್ಣ ಸಣ್ಣ ಬ್ಲಾಕ್ ಪಾಯಿಂಟ್ ಹೆಚ್ಚಗುತ್ತಿರುವ ಬಗ್ಗೆ ಸಭಾಧ್ಯಕ್ಷರಲ್ಲಿ ಮನವಿ ಸಲ್ಲಿಸಿದರು.

ಅಧ್ಯಕ್ಷರು : ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆಯ ಬಗ್ಗೆ ಹಲವು ದೂರುಗಳು ದಿನ ನಿತ್ಯಾ ಬರುತ್ತಿರುವುದರಿಂದ ಪೌರ ಕಾರ್ಮಿಕರ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಮತ್ತು ಶೌಚಾಲಯಗಳ ನಿರ್ವಹಣೆಯ ಗುತ್ತಿಗೆದಾರರ ಕಾಯದೇಶವನ್ನು ಪರಿಶೀಲನೆಗೆ ನೀಡಲು ಕೋರಿದರು ಹಾಗೂ ಗೈರು ಹಾಜರಾಗುವ ಆಟೋಗಳು ಮತ್ತು ಪೌರ ಕಾರ್ಮಿಕರಿಗೆ ನಿಯಮನುಸಾರ ಕ್ರಮ ಕೈಗೊಳ್ಳಲು ತಿಳಿಸಿದರು.

ಸದರಿ ವಿಷಯದ ಬಗ್ಗೆ ಸದಸ್ಯರಾದ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ಸಲ್ಲಿಸಿ ಗೈರು ಹಾಜರಾದವರಿಗೆ ನಿಯಮನುಸಾರ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಛಲವಾಧಿ ಪಾಳ್ಯ ವಾರ್ಡ್ ವ್ಯಾಪ್ತಿಯು ಹೆಚ್ಚಿನ ಪ್ರಮಾಣದಲ್ಲಿ ಸ್ಲಂಗಳಿಂದ ಕೂಡಿದ್ದು ಮಳೆಗಾಲದಲ್ಲಿ ರಸ್ತೆ ಬದಿ ನೀರು ನಿಂತು ಸೊಳ್ಳೆಗಳ ಉತ್ಪದನೆಯು ಹೆಚ್ಚಿರುವುದರಿಂದ ಗ್ಯಾಂಗ್ ಮೇನ್ ಉಪಯೋಗಿಸಿಕೊಂಡು ಸೊಳ್ಳೆ ಔಷಧಿ ಸಿಂಪಡಿಸುವ ಗುತ್ತಿಗೆದಾರರನ್ನು ದಿನ ಔಷಧಿ ಸಿಪಡಿಸುವಂತೆ ಸೂಚಿಸಿದರು

ಅಧ್ಯಕ್ಷರು : ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆ ಔಷಧಿಯನ್ನು ಸಿಂಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು

ಕಮೀಟಿ ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚನ ಪ್ರಮಾಣದಲ್ಲಿ ಬೀದಿ ದೀಪಗಳ ಸಮಸ್ಯೆಯ ಬಗ್ಗೆ ದೂರುಗಳು ಬರುತ್ತಿದ್ದು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಮಾನ್ಯ ಅಧ್ಯಕ್ಷರು ಸದರಿ ವಿಷಯದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಆದೇಶ ನೀಡಿ ತುರ್ತಾಗಿ ಬೀದಿ ದೀಪಗಳ ನಿರ್ವಹಣೆ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

------3

ಅಧ್ಯಕ್ಷರು: ಬಿ.ಡಬ್ಲ್ಯೂ. ಎಸ್. ಎಸ್. ಬಿ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ನೀರು ಮತ್ತು ಒಳಚರಂಡಿಗೆ ಸಂಬಂಧಿಸಿದ ದೂರುಗಳನ್ನು ದೂರು ಪುಸ್ತಕವನ್ನು ತೊರಿಸಿ ಸದರಿ ದೂರುಗಳನ್ನು ತುರ್ತಾಗಿ ನಿರ್ವಹಿಸಲು ಸೂಚಿಸಿದರು

ಅಧ್ಯಕ್ಷರು: ಬಿ.ಡಬ್ಲ್ಯೂ. ಎಸ್. ಎಸ್. ಬಿ ಅಧಿಕಾರಿಗಳು ವ್ಯಾಡ್ ವ್ಯಾಪ್ತಿಯಲ್ಲಿ ನಮ್ಮ ಕಛೇರಿಗೆ ಬರುವ ದೂರುಗಳನ್ನು ತುರ್ತಾಗಿ ನಿರ್ವಹಿಸುತ್ತೀದ್ದು ತಮ್ಮ ಕಛೇರಿಗೆ ಬರುವ ದೂರುಗಳನ್ನು ಸಹ ಅಧ್ಯತೆ ಮೇರೆಗೆ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ಬೇಸ್ಕಂ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯೂತ್ (ಬೇಸ್ಕಂ) ಗೆ ಸಂಬಂಧಿಸಿದ ದೂರುಗಳನ್ನು ದೂರು ಪುಸ್ತಕವನ್ನು ತೊರಿಸಿ ಸದರಿ ದೂರುಗಳನ್ನು ತುರ್ತಾಗಿ ನಿರ್ವಹಿಸಲು ಸೂಚಿಸಿದರು

ಬೇಸ್ಕಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ನಮ್ಮ ಕಛೇರಿಗೆ ಬರುವ ದೂರುಗಳನ್ನು ತುರ್ತಾಗಿ ನಿರ್ವಹಿಸುತ್ತೀದ್ದು ತಮ್ಮ ಕಛೇರಿಗೆ ಬರುವ ದೂರುಗಳನ್ನು ಸಹ ಅಧ್ಯತೆ ಮೇರೆಗೆ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ವಾರ್ಡ್ ನಂ. 138ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಭೂತ್ ಮಟ್ಟದ ಅಧಿಕಾರಿಗಳಿಂದ ಪ್ರತಿ ಮನೆ ಮನೆಗೆ ಭೇಟಿ ನೀಡಿ ಕೋವಿಡ್-19ರ ಬಗ್ಗೆ ತಿಳಿವಳಿಕೆ ನೀಡಲು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಕಂದಾಯ ಪರಿವೀಕ್ಷಕರಿಗೆ ಬಿ.ಬಿ.ಎಂ.ಪಿ ಆದೇಶದಂತೆ ವಾರ್ಡ್ ಮಟ್ಟದ ಕಂದಾಯ ಇಲಾಖೆಯ ಕಛೆರಿಯಲ್ಲಿ ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿಯನ್ನು ಲಗತ್ತೀಸಿ ಸಾರ್ವಜನಿಕರಿಗೆ ಪ್ರದರ್ಶಿಸುವಂತೆ ಸಭೆಯಲ್ಲಿ ತಿಳಿಸಿದರು

ಕಂದಾಯ ಪರಿವೀಕ್ಷಕರು ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿ ತಯಾರಗುತ್ತೀದ್ದು ನಂತರ ಬಿ.ಬಿ.ಎಂ.ಪಿ ನಿಯಮಾನುಸಾರ ಕಾರ್ಯನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ತೀರ್ಮಾನಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು, ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಸಂಪರ್ಕ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ ಕೆ. ಟಿ. ಶಂಕರನಾಥ್, ಸಹಾಯಕ ಕಾರ್ಯಪಾಲಕ ಅಭಿಯಂತರರು( ಬೆಸ್ಕಾಂ [illegible], ಉಪವಿಭಾಗ)ದೂ.9110223764 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 138 [illegible] 8618435036 | ಸದಸ್ಯ ಕಾರ್ಯದರ್ಶಿ | |
| 3 | ಗೀತಾ ಜೆಸ್ ದೂ. 9986537126 ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -138 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಾಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | |
| 6 | ಶ್ರೀ ಮೊಹಮ್ಮದ್ ಸಾಧಿಕ್ ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | MoHAMMED. SADIQ |
| 7 | ಶ್ರೀ ಶಬ್ಬೀರ್ ದೂ. 9880960040 ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | |
| 8 | ಶ್ರೀ ಶಿವಯ್ಯ (ಆರ್.ಐ) 9480685303 ಕಂದಾಯ ಪರಿವೀಕ್ಷಕರು | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಜೆಸ್, ದೂ. 9986537126 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಹನುಮಂತ ರಾಜು 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂತರರು , (ಬೆಸ್ಕಾಂ)ರವರ ಪ್ರತಿನಿಧಿ | ಸದಸ್ಯರು | |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138
ವಾರ್ಡ್ ಸಂಪರ್ಕ ಸಮಿತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಪರ್ಕ ಸಮಿತಿ, ವಾರ್ಡ್ ನಂ. 138

I/C. Assistant Engineer (Ele
O&M-8, GORIPALY
W-3, SUB DIVISION

ಪ್ರತಿಯನ್ನು,

1. ಜಂಟಿ ಆಯುಕ್ತರು ಪಶ್ಚಿಮ ರವರ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ.
3. ಕಛೇರಿ ಕಡತಕ್ಕೆ